ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ವಿರಾಜಪೇಟೆ

**ಉಪಸ್ಥಿತರುಃ ಸಂತೋಷ ಕೊಠಾರಿ,**

**ಬಿ.ಎ.ಎಲ್., ಎಲ್.ಎಲ್.ಬಿ.,**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ವಿರಾಜಪೇಟೆ**

# ಸಿ. ಸಿ. ನಂ. 699/2019

ಪಿರ್ಯಾದಿಃ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ , PACS ಸೊಸೈಟಿ ಲಿಮಿಟೆಡ್
ಪಾಲಿಬೆಟ್ಟ, ವಿರಾಜಪೇಟೆ ತಾಲ್ಲೂಕು .
ಶ್ರೀಮತಿ ಕೆ.ಎ.ಶಶಿಕಲಾ , ಗಂಡಃಕೆ.ಎನ್.ಅಚ್ಚಪ್ಪ
ಪ್ರಾಯ 54 ವರ್ಷ, ಪಾಲಿಬಟ್ಟೆನಗರ
ವಿರಾಜಪೇಟೆ ತಾಲ್ಲೂಕು

(ಶ್ರೀ ಕೆ.ಎನ್.ವಿಶ್ವನಾಥ್, ವಕೀಲರು,ವಿರಾಜಪೇಟೆ.)

***ವಿರುದ್ಧ***

ಆರೋಪಿಃ ಶ್ರೀಮತಿ ಸಾರಾಮ್ಮ.ಪಿ.ಕೆ
ಗಂಡಃಅಬ್ದುಲ್ಲಾ
ವಾಸಃ ಊರುಗುಪ್ಪೆ, ಪಾಲಿಬೆಟ್ಟ
(ಶ್ರೀ ಎ.ಕ ಿ.ಎಂ , ವಕೀಲರು,ವಿರಾಜಪೇಟೆ.)

**<u>::ದಂಡ ಪ್ರಕ್ರಿಯಾ ಸಂಹಿತೆ ವಿಧಿ 313 (1)(ಬಿ) ರಡಿ ದಾಖಲಿಸಿದ ಆರೋಪಿತರ ಹೇಳಿಕೆ ::</u>**

ಪ್ರಶ್ನೆಃ 1 ಪಿರ್ಯಾದುದಾರರ ಸಾಕ್ಷ್ಯವನ್ನು ತಿಳಿದುಕೊಂಡಿರುವಿರಾ?
ಉತ್ತರಃ

ಪ್ರಶ್ನೆಃ 2 ಪ್ರಾಸಾ 1 ಶ್ರೀಮತಿ ಕೆ.ಎ.ಶಶಿಕಲಾರವರು ತಮ್ಮ ಮುಖ್ಯ ವಿಚಾರಣೆಯಲ್ಲಿ, ಆರೋಪಿಯಾದ ಸಾರಾಮ್ಮ.ಪಿ.ಕೆ ರವರಿಗೆ PACS ಸೊಸೈಟಿ ಲಿಮಿಟೆಡ್ ಪಾಲಿಬೆಟ್ ಶಾಖೆಯಿಂದ ಸಾಲವನ್ನು ಕೊಟ್ಟಿರುತ್ತೇನೆ ಎಂದು ನುಡಿಯುತ್ತಾರೆ. ಈ ಬಗ್ಗೆ ನೀವೇನು ಹೇಳಬಯಸುವಿರಿ?

ಉತ್ತರಃ

ಪ್ರಶ್ನೆಃ 3 ಪ್ರಾಸಾ 1 ರವರು ಮುಂದುವರೆದು, ಸದರಿ ಸಾಲವನ್ನು ಮರುಪಾವತಿ ಮಾಡುವ ಸಲುವಾಗಿ ಆರೋಪಿಯಾದ ನೀವು ಚೆಕ್ ನಂಬರ್ 135808,ರೂ.1,68,747/- ಗಳನ್ನು ನಮೂದಿಸಿ, ದಿನಾಂಕ 21.02.2019 ರಂದು ಸದರಿ ಸಾಲವನ್ನು ತೀರಿಸುವ ಸಲುವಾಗಿ ಇಂಡಿಯನ್ ಓವರ್ ಸಿಸ್ ಬ್ಯಾಂಕ್, ಪಾಲಿಬೆಟ್ಟ ಶಾಖೆಯ ತಮ್ಮ ಖಾತೆಗೆ ಸಂಬಂಧಿಸಿದ ಚೆಕ್ ನೀಡಿದ್ದು, ಅದನ್ನು ನಗದೀಕರಿಸಿಕೊಂಡು ಸಾಲದ ಹಣವನ್ನು

ಮರುಪಾವತಿ ಮಾಡಿಕೊಳ್ಳಬೇಕೆಂದು ಆರೋಪಿ ನನಗೆ ತಿಳಿಸಿರುತ್ತಾರೆ ಎಂದು ನುಡಿದಿರುತ್ತಾರೆ. ಈ ಬಗ್ಗೆ ನೀವೇನು ಹೇಳಬಯಸುವಿರಿ?

ಉತ್ತರಃ

ಪ್ರಶ್ನೆಃ 4 ಫ್ರಾಸಾ 1 ರವರು ಮುಂದುವರೆದು, ನಿಮ್ಮ ಕೋರಿಕೆಯ ಮೇರೆಗೆ ಸದರಿ ಚೆಕ್‌ನ್ನು ಬ್ಯಾಂಕ್ ಇಂಡಿಯನ್ ಓವರ್ ಸಿಸ್ ಬ್ಯಾಂಕ್, ಪಾಲಿಬೆಟ್ಟ ಶಾಖೆಯಿಂದ ನಗದೀಕರಿಸಲು ಸಲ್ಲಿಸಿದರೆ ಆದರೆ ಆರೋಪಿಯ ಬ್ಯಾಂಕ್ ನವರು "Funds Insufficient" ಎಂಬ ಕಾರಣ ನೀಡಿ ಚೆಕ್‌ನ್ನು ಅಮಾನ್ಯಗೊಳಿಸಿ ದಿನಾಂಕಃ 25.02.2019 ರ ಮೆಮೋದೊಂದಿಗೆ ಹಿಂತಿರುಗಿಸಿರುತ್ತಾರೆ ಎಂದು ನುಡಿದಿರುತ್ತಾರೆ. ಈ ಬಗ್ಗೆ ನೀವೇನು ಹೇಳಬಯಸುವಿರಿ?

ಉತ್ತರಃ

ಪ್ರಶ್ನೆಃ 5 ಫ್ರಾಸಾ 1 ರವರು ಮುಂದುವರೆದು, ಚೆಕ್ ಅಮಾನ್ಯಗೊಂಡು ಮರಳಿ ಬಂದ ಬಳಿಕ ದಿನಾಂಕಃ 20.03.2019 ರಂದು ಆರೋಪಿಗೆ ತನ್ನ ವಕೀಲರ ಮೂಲಕ ನೋಂದಾಯಿತ ಅಂಚೆಯಲ್ಲಿ ನೋಟೀಸ್ ಕಳುಹಿಸಿ ಚೆಕ್‌ನಲ್ಲಿನ ಹಣವನ್ನು ಪಾವತಿ ಮಾಡಬೇಕೆಂದು ತಗಾದೆ ಮಾಡಿರುತ್ತೇನೆ ಆದರೂ ಸಹಾ ಆರೋಪಿಯು ಚೆಕ್‌ನ ಬಾಬ್ತು ಹಣವನ್ನು ಪಾವತಿಸಿರುವುದಿಲ್ಲ ಎಂದು ನುಡಿದಿರುತ್ತಾರೆ. ಈ ಬಗ್ಗೆ ನೀವೇನು ಹೇಳಬಯಸುವಿರಿ?

ಉತ್ತರಃ

ಪ್ರಶ್ನೆಃ 6 ಫ್ರಾಸಾ 1 ರವರು ಮುಂದುವರೆದು, ಆರೋಪಿ ನನಗೆ ವಂಚನೆ ಮಾಡುವ ಉದ್ದೇಶದಿಂದ, ತಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲದೇ ಇದ್ದರೂ ಚೆಕ್‌ನ್ನು ನೀಡಿರುತ್ತಾರೆ ಮತ್ತು ಚೆಕ್ ಹಣವನ್ನು ಪಾವತಿಸಿರುವುದಿಲ್ಲ ಎಂದು ತಿಳಿಸಿ ನಿಪಿ-1 ರಿಂದ ನಿಪಿ-6 ನ್ನು ಗುರುತಿಸಿಕೊಂಡಿದ್ದಾರೆ. ಈ ಬಗ್ಗೆ ನೀವೇನು ಹೇಳಬಯಸುವಿರಿ?

ಉತ್ತರಃ

ಪ್ರಶ್ನೆಃ 7 ಮೇಲೆ ಓದಿ ಹೇಳಲಾದ ಪ್ರಶ್ನೆಗಳು ನಿಮಗೆ ಅರ್ಥವಾಯಿತೆ?

ಉತ್ತರ:

ಪ್ರಶ್ನೆಃ 8 ಈ ಮೊಕದ್ದಮೆ ಬಗ್ಗೆ ನೀವೇನಾದರೂ ಹೇಳುವುದು ಇದೆಯೇ?

ಉತ್ತರಃ

ಪ್ರಶ್ನೆಃ 9 ನಿಮ್ಮ ಪರವಾಗಿ ಅಭಿರಕ್ಷಣಾ ಸಾಕ್ಷ್ಯ ಇದೆಯೇ? ಇದ್ದರೆ ಮಂಡಿಸಿ.

ಉತ್ತರಃ

(ಮೇಲಿನ ಎಲ್ಲಾ ಪ್ರಶ್ನೆಗಳನ್ನು ಆರೋಪಿಗೆ ಓದಿ, ತಿಳಿ ಹೇಳಿದ ನಂತರ ಆರೋಪಿ ಅದನ್ನು ಅರ್ಥೈಸಿಕೊಂಡು ನಂತರ ನೀಡಿದ ಉತ್ತರಗಳನ್ನು ನಾನೇ ಸ್ವತಃ ದಾಖಲು ಮಾಡಿದ್ದೇನೆ. ಸದರಿ ದಾಖಲೆಯು ಸರಿಯಾದುದು ಮತ್ತು ನಿಜವಾದುದು ಎಂದು ದೃಡೀಕರಿಸುತ್ತೇನೆ.)

ಸಹಿಃ
(ಸಂತೋಷ ಕೊಠಾರಿ )

ದಿನಾಂಕಃ 24.09.2024.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ
ವಿರಾಜಪೇಟೆ.